ಪ್ರಜಾವಾಣಿ ಬುಧವಾರ • ಜೂನ್ 15, 2016

15/6/2016

## ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಡಾ.ಹೋಮಿ ಚೆರಿಯನ್ ಕರೆ

# ಕೃಷಿಯ ನೂತನ ತಂತ್ರಜ್ಞಾನ ರೈತರಿಗೆ ತಲುಪಲಿ

ಪ್ರಜಾವಾಣಿ ವಾರ್ತೆ

ಶಿವಮೊಗ್ಗ: ಸಾಂಬಾರು ಬೆಳೆಯುವ ರೈತರಿಗೆ ನೂತನ ತಂತ್ರಜ್ಞಾನ ತಲುಪಿಸಿದಾಗ ಸಹಜವಾಗಿ ಉತ್ಪಾದನೆ ಹೆಚ್ಚಳವಾಗಲಿದೆ ಎಂದು ಕಲ್ಲಿಕೋಟೆ ಅಡಿಕೆ ಮತ್ತು ಸಾಂಬಾರು ಬೆಳೆಗಳ ನಿರ್ದೇಶನಾಲಯದ ನಿರ್ದೇಶಕ ಡಾ.ಹೋಮಿ ಚೆರಿಯನ್ ಹೇಳಿದರು.

ನಗರದ ಜೆಎನ್‌ಎನ್‌ಸಿಇ ಮಹಾವಿದ್ಯಾಲಯದ ಎಂಬಿಎ ಸಭಾಂಗಣದಲ್ಲಿ ಮಂಗಳವಾರ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ ಹಾಗೂ ಅಡಿಕೆ ಮತ್ತು ಸಾಂಬಾರು ಅಭಿವೃದ್ಧಿ ನಿರ್ದೇಶನಾಲಯದ ವತಿಯಿಂದ 'ಸಾಂಬಾರು ಬೆಳೆಗಳ ಉತ್ಪಾದನೆ, ಮಾರುಕಟ್ಟೆ ಮತ್ತು ಮೌಲ್ಯವರ್ಧನೆ' ಕುರಿತು ಹಮ್ಮಿಕೊಳ್ಳಲಾಗಿದ್ದ ರಾಜ್ಯಮಟ್ಟದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.




ಶಿವಮೊಗ್ಗದ ಜೆಎನ್‌ಎನ್‌ಸಿಇ ಕಾಲೇಜಿನ ಎಂಬಿಎ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 'ಸಾಂಬಾರು ಬೆಳೆಗಳ ಉತ್ಪಾದನೆ, ಮಾರುಕಟ್ಟೆ ಮತ್ತು ಮೌಲ್ಯವರ್ಧನೆ' ಕುರಿತ ವಿಚಾರ ಸಂಕಿರಣದಲ್ಲಿ ಡಾ.ಹೋಮಿ ಚೆರಿಯನ್ ಸಾಂಬಾರು ಬೆಳೆಗಳ ಕುರಿತು ಕೈಪಿಡಿ ಬಿಡುಗಡೆಗೊಳಿಸಿದರು.

'ಈಚೆಗೆ ಸಾಂಬಾರು ಬೆಳೆಗಳ ಬೇಡಿಕೆ ಹೆಚ್ಚುತ್ತಿದೆ. ದೇಶದಲ್ಲಿ ಸಾಂಬಾರು ಪದಾರ್ಥ ಬೆಳೆಯುವ ರಾಜ್ಯಗಳಲ್ಲಿ ಅತಿಹೆಚ್ಚು ಸಾಂಬಾರು ಬೆಳೆಯುವ ರಾಜ್ಯ ಕರ್ನಾಟಕವಾಗಿದೆ. ಆದರೂ ಮಾರುಕಟ್ಟೆಯ ಬೇಡಿಕೆಯಷ್ಟು ಸಾಂಬಾರು ಬೆಳೆಗಳ ಉತ್ಪಾದನೆ ಸಾಧ್ಯವಾಗಿಲ್ಲ. ವಿಶ್ವವಿದ್ಯಾಲಯಗಳು ಕಾಲಕಾಲಕ್ಕೆ ಸಂಶೋಧಿಸುವ, ಆವಿಷ್ಕರಿಸುವ ಅತ್ಯಾಧುನಿಕ ನೂತನ ತಂತ್ರಜ್ಞಾನವನ್ನು ರೈತರ ಮನೆಬಾಗಿಲಿಗೆ ತಲುಪಿಸುವಲ್ಲಿ ಇನ್ನಷ್ಟು ಕಾರ್ಯೋನ್ಮುಖವಾಗಬೇಕಿದೆ ಎಂದರು.

ಪ್ರತಿವರ್ಷ ರಾಜ್ಯದಲ್ಲಿ ವೈವಿಧ್ಯಮಯ ಹವಾಗುಣ ಪ್ರದೇಶಗಳಲ್ಲಿ 16ಕ್ಕೂ ಹೆಚ್ಚಿನ ಸಾಂಬಾರು ಬೆಳೆ ಬೆಳೆಯಲಾಗುತ್ತಿದೆ. ಸಾಂಬಾರು ಬೆಳೆಯಲ್ಲಿ ಹಲವು ಬಗೆಯ ಸುಧಾರಣೆ ತರಲಾಗಿದೆ. ಆದರೂ ಬೆಳೆಗಳ ಉತ್ಪಾದನೆಯ ಏರಿಕೆ ಮಾತ್ರ ಅತಿ ಕಡಿಮೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

**ಮುಖ್ಯಾಂಶಗಳು**

- ಸಾಂಬಾರು ಬೆಳೆಗೆ ಬೇಡಿಕೆ ಹೆಚ್ಚಳ
- ಬೆಳೆಯಲ್ಲಿ ಹಲವು ಸುಧಾರಣೆ
- ವಿವಿಗಳು ರೈತರಿಗೆ ಸಂಪರ್ಕ ಸೇತುವೆಯಾಗಲಿ

ರೈತರಲ್ಲಿ ಅರಿವು ಮೂಡಿಸುವ ಉತ್ತಮ ವಿಚಾರ ಸಂಕಿರಣಗಳು ನಡೆದಲ್ಲಿ ಯಾವುದೇ ಬೆಳೆಗಳ ಉತ್ಪಾದನೆಗೆ ಪೂರಕ ವಾತಾವರಣ ನಿರ್ಮಿಸಲಿವೆ. ಕೃಷಿ ವಿಶ್ವವಿದ್ಯಾಲಯ ಮತ್ತು ಕೃಷಿ ಇಲಾಖೆ ಅಧಿಕಾರಿಗಳು ಈ ನಿಟ್ಟಿನಲ್ಲಿ ಬೆಳೆಗಾರರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ಸಾಂಬಾರು ಬೆಳೆ ಬೆಳೆಯಲು ರಾಜ್ಯದಲ್ಲಿ ವಿಪುಲ ಅವಕಾಶಗಳಿದ್ದು, ಇನ್ನಷ್ಟು ವೈವಿಧ್ಯಮಯವಾಗಿ ಬೆಳೆಯಲು ರೈತರಿಗೆ ಪ್ರೋತ್ಸಾಹ ನೀಡಬೇಕು. ಉತ್ಪಾದಕರು ಮತ್ತು ಮಾರುಕಟ್ಟೆಯ ನಡುವೆ ಸಂಪರ್ಕ ಸೇತುವೆಯಾಗಿ ವಿವಿಗಳು ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಕಾಸರಗೋಡು ಕೇಂದ್ರೀಯ ಪ್ಲಾಂಟೇಷನ್ ಬೆಳೆಗಳ ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ಪಿ.ಚೌಡಪ್ಪ ಮಾತನಾಡಿ, ತೋಟಗಾರಿಕೆ ಬೆಳೆಗಾರರು ಅಡಿಕೆ ಬೆಳೆಯನ್ನು ಪ್ರಧಾನ ಬೆಳೆಯನ್ನಾಗಿ ಅವಲಂಬಿಸದೇ ಪರ್ಯಾಯ ಹಾಗೂ ಲಾಭದಾಯಕವಾದ ಸಾಂಬಾರು ಬೆಳೆ ಬೆಳೆಯಲು ಮುಂದಾಗಬೇಕು. ಅಡಿಕೆಯೊಂದಿಗೆ ಕಾಳು ಮೆಣಸು ಮತ್ತು ಕೋಕೋ ಬೆಳೆದು ಅತಿ ಹೆಚ್ಚು ಲಾಭ ಗಳಿಸಬಹುದು ಎಂದರು.

ಕೃಷಿ ಮತ್ತು ತೋಟಗಾರಿಕೆ ವಿವಿಯ ಕುಲಪತಿ ಡಾ.ಸಿ. ವಾಸುದೇವಪ್ಪ ಅಧ್ಯಕ್ಷತೆ ವಹಿಸಿದ್ದರು. ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕ ಡಾ.ಎಂ.ಕೆ. ನಾಯ್ಕ್, ವಿಸ್ತರಣಾ ನಿರ್ದೇಶಕ ಡಾ.ಟಿ.ಎಚ್. ಗೌಡ, ಡಾ.ಜೆ. ವೆಂಕಟೇಶ್ ಉಪಸ್ಥಿತರಿದ್ದರು.